# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1788 |
| ಸದಸ್ಯರ ಹೆಸರು | : | ಶ್ರೀ ಆರ್. ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 14-03-2022 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ಸೊರಬ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಆನವಟ್ಟಿ ಉಪ ವಿಭಾಗ, ಮೆಸ್ಕಾಂ ವ್ಯಾಪ್ತಿಯಲ್ಲಿ ಅಕ್ರಮ-ಸಕ್ರಮ ಅಡಿ 2018 ರಲ್ಲಿ ಹಣ ಪಾವತಿಸಿದ ರೈತರಿಗೆ ಇಲ್ಲಿಯವರೆಗೆ ಪರಿವರ್ತಕ ಹಾಗೂ ಮೂಲಸೌಲಭ್ಯ ಒದಗಿಸದಿರಲು ಕಾರಣಗಳೇನು; (ವಿವರ ನೀಡುವುದು) | ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯ ಸೊರಬ ತಾಲ್ಲೂಕಿನ ಆನವಟ್ಟಿ ಉಪ-ವಿಭಾಗ ವ್ಯಾಪ್ತಿಯಲ್ಲಿ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಇಎನ್ 41/ವಿಎಸ್‌ಸಿ2014/ಪಿ1 ದಿನಾಂಕ: 14.07.2014 ರನ್ವಯ ಅಕ್ರಮ ಸಕ್ರಮ ಯೋಜನೆಯಡಿ ಕೃಷಿ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು 2018 ರಲ್ಲಿ ಒಟ್ಟು 635 ಅರ್ಜಿಗಳಿಗೆ ಮೂಲಭೂತ ಸೌಕರ್ಯ ಶುಲ್ಕ ಠೇವಣಿ ಹಾಗೂ ಇತರೇ ಶುಲ್ಕ ಪಾವತಿಸಲಾಗಿರುತ್ತದೆ. ಅದರಲ್ಲಿ 411 ಕೃಷಿ ನೀರಾವರಿ ಪಂಪುಸೆಟ್ಟುಗಳಿಗೆ 292 ಪರಿವರ್ತಕಗಳನ್ನು ಅಳವಡಿಸಿ ಈಗಾಗಲೇ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿರುತ್ತದೆ. |
| ಆ) | ಈ ಸೌಲಭ್ಯವನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು; | ಬಾಕಿ ಉಳಿದ 224 ಕೃಷಿ ನೀರಾವರಿ ಪಂಪುಸೆಟ್ಟುಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. |
| ಇ) | ಆನವಟ್ಟಿ ವ್ಯಾಪ್ತಿಯ ರೈತರ ಪಂಪ್‌ಸೆಟ್‌ಗಳಿಗೆ ಇಲ್ಲಿಯವರೆಗೆ ವಿದ್ಯುತ್ ಸಂಪರ್ಕ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಸಂಪರ್ಕ ನೀಡಲಾಗುವುದು; | ಆನವಟ್ಟಿ ಉಪ-ವಿಭಾಗ ವ್ಯಾಪ್ತಿಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಇಎನ್ 41/ವಿಎಸ್‌ಸಿ2014/ಪಿ1 ದಿನಾಂಕ: 14.07.2014 ರನ್ವಯ ಕೃಷಿ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ದಿನಾಂಕ 28.02.2022ರ ಅಂತ್ಯಕ್ಕೆ ಒಟ್ಟು 2093 ಅರ್ಜಿಗಳಿಗೆ ಮೂಲಭೂತ ಸೌಕರ್ಯ ಶುಲ್ಕ ಠೇವಣಿ ಹಾಗೂ ಇತರ . ಶುಲ್ಕ ಪಾವತಿಸಲಾಗಿರುತ್ತದೆ. ಅದರಲ್ಲಿ 883 ಕೃಷಿ ನೀರಾವರಿ ಪಂಪುಸೆಟ್ಟುಗಳಿಗೆ 744 ಪರಿವರ್ತಕಗಳನ್ನು ಅಳವಡಿಸಿ ಈಗಾಗಲೇ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿರುತ್ತದೆ. ಮೂಲಭೂತ ಸೌಕರ್ಯ ಕಲ್ಪಿಸಲು ಬಾಕಿ ಇರುವ 1210 ಸಂಖ್ಯೆಯ ಕೃಷಿ ನೀರಾವರಿ ಪಂಪುಸೆಟ್ಟುಗಳ ಪೈಕಿ 351 ಸಂಖ್ಯೆಯ ನೀರಾವರಿ ಪಂಪ್‌ಸೆಟ್‌ಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ಕಾಮಗಾರಿ ಪ್ರಗತಿಯಲ್ಲಿದ್ದು, ಉಳಿದ 859 ಸಂಖ್ಯೆಯ ಕೃಷಿ ಪಂಪ್‌ಸೆಟ್‌ಗಳಿಗೆ ಮೂಲಭೂತ ಸಂಪರ್ಕವನ್ನು ಕಲ್ಪಿಸಲು ಮೆಸ್ಕಾಂ ವತಿಯಿಂದ ಕ್ರಮ ಕೈಗೊಳ್ಳಲಾಗಿದೆ. |
| ಈ) | ಸದರಿ ವಿದ್ಯುತ್ ಸಂಪರ್ಕಕ್ಕೆ ಹಣಕಾಸಿನ ತೊಂದರೆಯಾಗಿರುವುದು ನಿಜವೇ; ಹಾಗಿದ್ದಲ್ಲಿ, ಯಾವಾಗ ಅನುದಾನದ ಕೊರತೆಯನ್ನು ನೀಗಿಸುವುದು? (ವಿವರ ನೀಡುವುದು) | |

ಸಂಖ್ಯೆ: ಇಎನ್ 58 ಇಬಿಎಸ್ 2022

(ವಿ ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು
ಸಂಸ್ಕೃತ ಸಚಿವರು